# ರೂತಳು

## ಮುನ್ನುಡಿ

“ನ್ಯಾಯಸ್ಥಾಪಕರು” ಎಂಬ ಪವಿತ್ರ ಬೈಬಲಿನ ಭಾಗ, ಇಸ್ರಯೇಲ್ ಜನಾಂಗದ ಚರಿತ್ರೆಯಲ್ಲಿ ಹಿಂಸಾಚಾರದಿಂದ ಕೂಡಿದ ಒಂದು ಕಾಲಾವಧಿಯನ್ನು ವರ್ಣಿಸುತ್ತದೆ. ಇದರ ಹಿನ್ನೆಲೆಯಲ್ಲಿ ಶಾಂತಿಯುತವಾದ ರೂತಳ ಈ ಚಿಕ್ಕ ಚರಿತ್ರೆ ಕಣ್ಣಿಗೆ ಕಟ್ಟುವಂತೆ ಎದ್ದು ನಿಲ್ಲುತ್ತದೆ.

ರೂತಳು ಪರಕೀಯಳು; ಮೋವಾಬ್ ನಾಡಿಗೆ ಸೇರಿದವಳು. ಆದರೂ, ಒಬ್ಬ ಇಸ್ರಯೇಲ್ ವಂಶಜನನ್ನು ಮದುವೆಯಾಗುತ್ತಾಳೆ. ಅವನು ಕಾಲವಾದಮೇಲೆ ಆಕೆ ತನ್ನ ಅತ್ತೆಯ ಬಗ್ಗೆ ಅಸಾಧಾರಣವಾದ ಗೌರವವನ್ನೂ ಪ್ರಾಮಾಣಿಕತೆಯನ್ನೂ ತೋರಿಸುತ್ತಾಳೆ. ಅದು ಮಾತ್ರವಲ್ಲ, ಇಸ್ರಯೇಲರ ದೇವರಾದ ಸರ್ವೇಶ್ವರಸ್ವಾಮಿಯಲ್ಲಿ ಅಪೂರ್ವವಾದ ವಿಶ್ವಾಸವನ್ನು ವ್ಯಕ್ತಪಡಿಸುತ್ತಾಳೆ. ಕ್ರಮೇಣ, ತನ್ನ ದಿವಂಗತ ಪತಿಯ ಹತ್ತಿರದ ಸಂಬಂಧಿಕರಲ್ಲಿ ಒಬ್ಬನನ್ನು ವಿವಾಹಮಾಡಿಕೊಳ್ಳುತ್ತಾಳೆ. ಇದರ ಪರಿಣಾಮವಾಗಿ ಇಸ್ರಯೇಲರ ಉನ್ನತೋನ್ನತ ರಾಜನಾದ ದಾವೀದನಿಗೆ ಮುತ್ತಜ್ಜಿಯಾಗುತ್ತಾಳೆ. ಲೋಕೋದ್ಧಾರಕ ಯೇಸುಸ್ವಾಮಿ ಜನಿಸಿದ್ದು ಈ ವಂಶದಲ್ಲೇ.

ದೇವರಿಂದ ದೂರವಾದ ಇಸ್ರಯೇಲರಿಗೆ ಬಂದೊದಗಿದ ಅನಾಹುತಗಳನ್ನು “ನ್ಯಾಯಸ್ಥಾಪಕರು” ಎಂಬ ಬೈಬಲ್ ಭಾಗ ಬಣ್ಣಿಸುತ್ತದೆ. ರೂತಳ ಈ ಪುಟ್ಟ ಚರಿತ್ರೆಯಾದರೋ ದೇವರಿಗೆ ಹತ್ತಿರವಾಗುವ, ದೇವರೊಡನೆ ಒಂದಾಗುವ, ಹೊರನಾಡಿಗರಿಗೆ ದೊರಕುವ ವರಪ್ರಸಾದವನ್ನು ಒತ್ತಿಹೇಳುತ್ತದೆ.

## **ಪರಿವಿಡಿ**


| | | |
|---|---|---|
| ನವೊಮಿ ರೂತಳ ಸಮೇತ ಬೆತ್ಲೆಹೇಮಿಗೆ ಹಿಂದಿರುಗುತ್ತಾಳೆ | – | 1.1 – 1.22 |
| ರೂತ್ ಮತ್ತು ಬೋವಜನ ಭೇಟಿ | – | 2.1 – 3.18 |
| ಬೋವಜ ಮತ್ತು ರೂತಳ ವಿವಾಹ | – | 4.1 – 22 |


## **ರೂತಳ ಚರಿತ್ರೆ**

**1** ಇಸ್ರಯೇಲ್ ನಾಡಿನಲ್ಲಿ ನ್ಯಾಯಸ್ಥಾಪಕರು ಆಳುತ್ತಿದ್ದಾಗ, ಒಮ್ಮೆ ಕಠಿಣವಾದ ಬರಗಾಲವು ತಲೆದೋರಿತು.
ಈ ಕಾರಣ ಜುದೇಯ ಪ್ರಾಂತ್ಯದ ಬೆತ್ಲೆಹೇಮ್ ಎಂಬ ಊರಿನವನೊಬ್ಬನು ತನ್ನ ಪತ್ನಿ ಮತ್ತು ಪುತ್ರರಿಬ್ಬರನ್ನು
ಕರೆದುಕೊಂಡು ಮೋವಾಬ್ ಎಂಬ ನಾಡಿಗೆ ವಲಸೆ ಹೋದನು. [2]ಅವನ ಹೆಸರು ಎಲಿಮೆಲೆಕ್; ಅವನ
ಪತ್ನಿಯ ಹೆಸರು ನವೊಮಿ. ಮಹ್ಲೋನ್ ಮತ್ತು ಕಿಲ್ಯೋನ್ ಅವರ ಇಬ್ಬರು ಪುತ್ರರು. ಇವರು ಇಸ್ರಯೇಲ್
ವಂಶದ ಎಫ್ರಾತಕುಲಕ್ಕೆ ಸೇರಿದವರು, ಬೆತ್ಲೆಹೇಮಿನವರು. [3]ಇವರು ಮೋವಾಬ್ ನಾಡಿನಲ್ಲಿ ವಾಸಿಸುತ್ತಿದ್ದಾಗ
ಎಲಿಮೆಲೆಕನು ಮರಣ ಹೊಂದಿದನು. ವಿಧವೆಯಾದ ನವೊಮಿ ಇಬ್ಬರು ಗಂಡು ಮಕ್ಕಳೊಡನೆ ಅಲ್ಲೇ
ಉಳಿದಳು. [4]ಹುಡುಗರು ಇಬ್ಬರೂ, ಮೋವಾಬ್ಯ ಹುಡುಗಿಯರನ್ನು ವಿವಾಹ ಆದರು. ಒಬ್ಬಳ ಹೆಸರು
ಒರ್ಫಾ ಮತ್ತು ಇನ್ನೊಬ್ಬಳು ರೂತ್. ಅವರು ಅಲ್ಲಿ ಸುಮಾರು ಹತ್ತು ವರ್ಷಗಳ ಕಾಲ ವಾಸಮಾಡಿದ

ನಂತರ, [5]ಮಹ್ಲೋನ್ ಮತ್ತು ಕಿಲ್ಯೋನ್ ಸಹ ತೀರಿ ಹೋದರು. ಹೀಗೆ ನವೊಮಿ ತನ್ನ ಪತಿಯನ್ನೂ ಇಬ್ಬರು ಪುತ್ರರನ್ನೂ ಕಳೆದುಕೊಂಡು ಒಬ್ಬಂಟಿಗಳು ಆದಳು.

### ಬೆತ್ಲೆಹೇಮಿಗೆ ಪುನರಾಗಮನ

6 ಸರ್ವೇಶ್ವರಸ್ವಾಮಿಯ ಅನುಗ್ರಹದಿಂದ ತನ್ನ ನಾಡಿನಲ್ಲಿ ಒಳ್ಳೆಯ ಮಳೆ ಬೆಳೆಗಳಾಗಿವೆ ಎಂಬ
ಸಮಾಚಾರ ಮೋವಾಬ್ ನಾಡಿನಲ್ಲಿದ್ದ ನವೊಮಿಗೆ ತಿಳಿದು ಬಂದಿತು. [7]ಆದ್ದರಿಂದ ಅವಳು ಅಲ್ಲಿಗೆ
ಹಿಂದಿರುಗಿ ಹೋಗಲು ಸಿದ್ಧತೆಮಾಡಿ ಜುದೇಯಕ್ಕೆ ಹೊರಟಳು. ಸೊಸೆಯರು ಅವಳ ಜೊತೆಯಲ್ಲೆ
ಹೋದರು. [8]ಹೀಗೆ ಹೋಗುತ್ತಿರುವಾಗ ದಾರಿಯಲ್ಲಿ ನವೊಮಿ ಅವರಿಗೆ: "ನೀವು ಇಬ್ಬರೂ ನಿಮ್ಮ
ತವರುಮನೆಗಳಿಗೆ ಹಿಂದಿರುಗಿರಿ. ನನಗೂ ಮರಣಹೊಂದಿದ ನನ್ನ ಮಕ್ಕಳಿಗೂ ನೀವು ಒಳಿತು ಮಾಡಿದಿರಿ.
[9]ಸರ್ವೇಶ ನಿಮಗೂ ಹಾಗೆಯೇ ಒಳಿತನ್ನು ಮಾಡಲಿ. ನೀವಿಬ್ಬರೂ ಪುನಃ ಮದುವೆಯಾಗಿ
ಸುಖವಾಗಿರುವಂತೆ ಅನುಗ್ರಹಿಸಲಿ!' ಎಂದು ಹರಸಿ ಅವರನ್ನು ಬೀಳ್ಕೊಡುತ್ತಾ ಮುದ್ದಿಟ್ಟಳು. [10]ಆದರೆ ಅವರು,
"ಇಲ್ಲಮ್ಮಾ, ನಿಮ್ಮನ್ನು ಬಿಟ್ಟು ಹೋಗಲಾರೆವು. ನಾವೂ ನಿಮ್ಮ ಜೊತೆಯಲ್ಲಿಯೇ ನಿಮ್ಮ ಸ್ವಜನರ ಬಳಿಗೆ
ಬರುತ್ತೇವೆ," ಎಂದು ಅಳಲಾರಂಭಿಸಿದರು.

11 ಆಗ ನವೊಮಿ, "ಮಕ್ಕಳೇ, ನೀವು ಹಿಂದಿರುಗುವುದು ಒಳ್ಳೆಯದು. ನನ್ನ ಸಂಗಡ ಏಕೆ
ಬರಬೇಕೆಂದಿರುವಿರಿ? ನೀವು ಪುನಃ ಮದುವೆಯಾಗುವುದಕ್ಕೆ ನನಗೆ ಬೇರೆ ಮಕ್ಕಳಿರುವರೇ? [12]ಮಕ್ಕಳೇ,
ನೀವು ಹಿಂದಿರುಗಿ ಹೋಗಿರಿ. ಪುನಃ ಮದುವೆಮಾಡಿಕೊಳ್ಳುವ ಪ್ರಾಯ ನನಗೆ ದಾಟಿ ಹೋಗಿದೆ. ಒಂದು
ವೇಳೆ ಸಂತಾನಭಾಗ್ಯದ ನಿರೀಕ್ಷೆಯಿಂದ ಈ ಹೊತ್ತೇ ಮದುವೆಯಾಗಿ ಮಕ್ಕಳನ್ನು ಹಡೆದರೂ [13]ಅವರು
ಬೆಳೆದು ದೊಡ್ಡವರಾಗುವವರೆಗೂ ನೀವು ಕಾದಿರಲು ಸಾಧ್ಯವೇ? ಅಲ್ಲಿಯವರೆಗೂ ಮದುವೆಯಾಗದೆ
ಇರುವಿರೋ? ಬೇಡ, ಮಕ್ಕಳೇ, ಸರ್ವೇಶ್ವರ ನನ್ನ ಕೈ ಬಿಟ್ಟಿದ್ದಾರೆ, ನಿಮಗಾಗಿ ನಾನು ಬಹಳ
ವಿಷಾದಿಸುತ್ತೇನೆ," ಎಂದು ಸಮಾಧಾನ ಹೇಳಿದಳು.

14 ಅವರು ಇದನ್ನು ಕೇಳಿ ಇನ್ನೂ ಹೆಚ್ಚಾಗಿ ಅತ್ತರು. ಅನಂತರ ಒರ್ಫಾ ಅತ್ತೆಗೆ ಮುತ್ತಿಟ್ಟು ತನ್ನ
ಮನೆಗೆ ಹಿಂದಿರುಗಿ ಹೋದಳು. ರೂತಳು ಮಾತ್ರ ಅತ್ತೆಯನ್ನು ಬಿಟ್ಟುಹೋಗಲಿಲ್ಲ. [15]ಆಗ ನವೊಮಿ
ರೂತಳಿಗೆ: "ನೋಡು, ನಿನ್ನ ಓರಗತ್ತಿಯು ತನ್ನ ಜನಾಂಗದವರ ಬಳಿಗೂ ತನ್ನ ಕುಲದೇವರ ಬಳಿಗೂ
ಹಿಂದಿರುಗಿ ಹೋಗಿದ್ದಾಳೆ. ನೀನೂ ಅವಳಂತೆಯೇ ಹೋಗಿಬಿಡು," ಎಂದು ಒತ್ತಾಯಪಡಿಸಿದಳು.

16 ಅದಕ್ಕೆ ರೂತಳು: "ನಿಮ್ಮನ್ನು ಬಿಟ್ಟು ಹೋಗುವಂತೆ ಒತ್ತಾಯಪಡಿಸಬೇಡಿ. ನೀವು ಎಲ್ಲಿಗೆ
ಹೋದರೂ ನಾನೂ ಅಲ್ಲಿಗೆ ಬರುತ್ತೇನೆ. ನೀವು ಎಲ್ಲಿ ವಾಸಿಸಿದರೂ ನಾನು ಅಲ್ಲೇ ವಾಸಿಸುತ್ತೇನೆ. [17]ನಿಮ್ಮ
ಜನರೇ ನನ್ನ ಜನರು; ನಿಮ್ಮ ದೇವರೇ ನನ್ನ ದೇವರು; ನೀವು ಸಾಯುವಲ್ಲೇ ನಾನು ಸಾಯುವೆನು; ಅಲ್ಲಿಯೇ
ನನಗೆ ಸಮಾಧಿಯಾಗಲಿ. ಮರಣದಲ್ಲಿಯೂ ನಾನು ನಿಮ್ಮನ್ನು ಬಿಟ್ಟಿರಲಾರೆ. ಇಲ್ಲದಿದ್ದರೆ ಸರ್ವೇಶ್ವರ ನನಗೆ
ತಕ್ಕ ದಂಡನೆಯನ್ನು ವಿಧಿಸಲಿ!" ಎಂದು ಬೇಡಿಕೊಂಡಳು.

18 ರೂತಳು ತನ್ನ ಸಂಗಡ ಬರಲು ನಿರ್ಧರಿಸಿದ್ದಾಳೆಂದು ತಿಳಿದು ನವೊಮಿ ಅವಳನ್ನು ಮತ್ತೆ
ಒತ್ತಾಯಪಡಿಸಲಿಲ್ಲ.

19ಹಾಗೆಯೇ ಪ್ರಯಾಣವನ್ನು ಮುಂದುವರೆಸಿ ಅವರಿಬ್ಬರೂ ಬೆತ್ಲೆಹೇಮನ್ನು ತಲುಪಿದರು. ಅವರು
ಊರಿಗೆ ಹಿಂದಿರುಗಿ ಬಂದ ಸಂಗತಿ ಜನರಲ್ಲಿ ಕುತೂಹಲ ಮೂಡಿಸಿತು. ಊರಿನ ಹೆಂಗಸರು, "ಈಕೆ
ನವೊಮಿಯಲ್ಲವೇ?" ಎಂದು ವಿಚಾರಿಸತೊಡಗಿದರು.

20 ಅದಕ್ಕೆ ಅವಳು "ನನ್ನನ್ನು 'ನವೊಮಿ' ಎಂದು ಕರೆಯಬೇಡಿ; 'ಮಾರಾ' ಎಂದು ಕರೆಯಿರಿ.
ಏಕೆಂದರೆ ಸರ್ವಶಕ್ತ ದೇವರು ನನ್ನನ್ನು ಬಹಳ ದುಃಖಪಡಿಸಿದ್ದಾರೆ.

21 ಸಿರಿವಂತಳಾಗಿ ಇಲ್ಲಿಂದ ಹೋದೆ. ಗತಿಹೀನಳನ್ನಾಗಿ ಸರ್ವೇಶ್ವರ ನನ್ನನ್ನು ಹಿಂದಕ್ಕೆ
ಕರೆತಂದಿದ್ದಾರೆ. ಹೀಗೆ ಸರ್ವಶಕ್ತ ದೇವರು ನನಗೆ ವಿರೋಧವಾಗಿ ನನ್ನನ್ನು ಬಾಧಿಸಿರುವಾಗ ನೀವು ನನ್ನನ್ನು
ನವೊಮಿ ಎಂದು ಕರೆಯುವುದು ಸರಿಯೇ?" ಎಂದು ಉತ್ತರಕೊಟ್ಟಳು.

22 ಹೀಗೆ ನವೊಮಿ ತನ್ನ ಮೋವಾಬ್ಯ ಸೊಸೆಯಾದ ರೂತಳ ಸಂಗಡ ಬೆತ್ಲೆಹೇಮಿಗೆ ಬಂದಳು. ಆಗ ಜವೆಗೋದಿಯ ಸುಗ್ಗಿ ಪ್ರಾರಂಭವಾಗಿತ್ತು.

### ಬೋವಜನ ಹೊಲದಲ್ಲಿ ರೂತಳು

**2** ನವೊಮಿಗೆ ಬೋವಜ ಎಂಬ ನೆಂಟನು ಇದ್ದನು. ಅವನು ಐಶ್ವರ್ಯವಂತ ಮತ್ತು ಒಬ್ಬ ಗಣ್ಯ ವ್ಯಕ್ತಿ;
ನವೊಮಿಯ ಪತಿ ಎಲಿಮೆಲೆಕನ ಕುಟುಂಬಕ್ಕೆ ಸೇರಿದವನು. [2]ರೂತಳು ನವೊಮಿಗೆ: “ನಾನು ಹೊಲಗಳಿಗೆ
ಹೋಗಿ ತೆನೆಗಳನ್ನು ಆಯ್ದುಕೊಂಡು ಬರಲೇ? ಇದಕ್ಕೆ ಯಾರಾದರು ನನಗೆ ನೆರವಾಗಬಹುದು,” ಎಂದು
ಕೇಳಿದಳು. ನವೊಮಿ, “ಹೋಗಿ ಬಾ, ಮಗಳೇ,” ಎಂದು ಅಪ್ಪಣೆಕೊಟ್ಟಳು.

3 ರೂತಳು ಕೊಯ್ಯುವವರ ಹಿಂದೆ ಹೋಗುತ್ತಾ ಅಲ್ಲಲ್ಲಿ ಬಿದ್ದ ತೆನೆಗಳನ್ನು ಆಯ್ದುಕೊಳ್ಳುತ್ತಿದ್ದಳು. ಸುದೈವದಿಂದ ಅದು ಎಲಿಮೆಲೆಕನ ನೆಂಟನಾದ ಬೋವಜನ ಹೊಲವಾಗಿತ್ತು.

4 ಸ್ವಲ್ಪ ಹೊತ್ತಾದ ಮೇಲೆ ಇದ್ದಕ್ಕಿದ್ದ ಹಾಗೆ ಬೋವಜನು ಬೆತ್ಲೆಹೇಮಿನಿಂದ ಅಲ್ಲಿಗೆ ಬಂದನು. ಅವನು, “ಸರ್ವೇಶ್ವರಸ್ವಾಮಿ ನಿಮ್ಮೊಡನೆ ಇರಲಿ!” ಎಂದು ಕೆಲಸದಾಳುಗಳನ್ನು ವಂದಿಸಿದನು. ಅದಕ್ಕೆ ಅವರು, “ಸರ್ವೇಶ್ವರ ನಿಮ್ಮನ್ನೂ ಹರಸಲಿ!” ಎಂದು ಪ್ರತಿವಂದನೆ ಮಾಡಿದರು.

5 ಬೋವಜನು ಮೇಸ್ತ್ರಿಯನ್ನು ಕರೆದು, “ಇವಳು ಯಾವ ಮನೆಯ ಹೆಣ್ಣು?” ಎಂದು ವಿಚಾರಿಸಿದನು.

6 ಅದಕ್ಕೆ ಆ ಮೇಸ್ತ್ರಿ, “ಇವಳು ಮೋವಾಬ್ಯಳು, ನವೊಮಿಯ ಸಂಗಡ ಮೋವಾಬ್ ನಾಡಿನಿಂದ
ಹಿಂದಿರುಗಿ ಬಂದವಳು. [7]ಕೊಯ್ಯುವವರ ಹಿಂದೆ ಹೋಗಿ ಸಿವುಡಗಳ ಮಧ್ಯೆ ಹಕ್ಕಲಾಯ್ದುಕೊಳ್ಳುವುದಕ್ಕೆ
ಅಪ್ಪಣೆಯಾಗಬೇಕೆಂದು ಕೇಳಿಕೊಂಡಳು. ಬೆಳಿಗ್ಗೆ ಬಂದವಳು ಇನ್ನೂ ಇಲ್ಲೇ ಇದ್ದಾಳೆ. ಸದ್ಯಕ್ಕೆ ನೆರಳಿನಲ್ಲಿ
ವಿಶ್ರಮಿಸಿಕೊಳ್ಳುತ್ತಿದ್ದಾಳೆ,” ಎಂದು ಉತ್ತರಕೊಟ್ಟನು.

8 ತದನಂತರ ಬೋವಜನು ರೂತಳಿಗೆ, “ನೋಡಮ್ಮಾ, ಈ ಹೊಲವನ್ನು ಬಿಟ್ಟು ಮತ್ತೆ ಎಲ್ಲಿಯೂ
ತೆನೆ ಆಯಲು ಹೋಗಬೇಕಾಗಿಲ್ಲ, ನನ್ನ ಹೆಣ್ಣಾಳುಗಳ ಜೊತೆಯಲ್ಲಿಯೇ ಇರು. [9]ಅವರು ಎಲ್ಲಿ ಪೈರು
ಕೊಯ್ಯುತ್ತಾರೋ ಅವರ ಹಿಂದೆ ಹೋಗಿ ತೆನೆಗಳನ್ನು ಆರಿಸಿಕೊ. ನಿನಗೆ ಯಾರೂ ತೊಂದರೆ
ಕೊಡಬಾರದೆಂದು ನನ್ನ ಆಳುಗಳಿಗೆ ಆಜ್ಞಾಪಿಸಿದ್ದೇನೆ. ನಿನಗೆ ಬಾಯಾರಿಕೆಯಾದರೆ ಹೋಗಿ ನನ್ನ ಆಳುಗಳು
ತುಂಬಿಸಿರುವ ನೀರಿನ ಬಾನೆಗಳಿಂದ ಕುಡಿ,” ಎಂದನು.

10 ಆಗ ರೂತಳು ಅವನಿಗೆ ಸಾಷ್ಟಾಂಗವೆರಗಿ ನಮಸ್ಕರಿಸಿ, “ಒಡೆಯಾ, ನನ್ನ ಮೇಲೆ ಏಕೆ ಇಷ್ಟು ಕನಿಕರ? ಪರದೇಶಿಯಾದ ನನಗೆ ತಾವಿಷ್ಟು ದಯೆತೋರಿಸುವುದೇಕೆ?” ಎಂದಳು.

11 ಅದಕ್ಕೆ ಬೋವಜನು, “ನಿನ್ನ ಪತಿ ತೀರಿಹೋದಂದಿನಿಂದ ನೀನು ಅತ್ತೆಗಾಗಿ ಮಾಡಿದ್ದ ಎಲ್ಲವನ್ನೂ
ಕುರಿತು ಕೇಳಿದ್ದೇನೆ. ನೀನು ಹೇಗೆ ನಿನ್ನ ತಂದೆತಾಯಿಗಳನ್ನು ಮತ್ತು ಸ್ವಂತನಾಡನ್ನು ಬಿಟ್ಟು, ಅಪರಿಚಿತರಾದ
ಜನರ ಮಧ್ಯೆ ವಾಸಿಸಲು ಬಂದಿರುವೆ ಎಂಬುದು ಸಹ ನನಗೆ ತಿಳಿದಿದೆ. [12]ನೀನು ಮಾಡಿದ್ದಕ್ಕೆಲ್ಲಾ ದೇವರು
ನಿನಗೆ ತಕ್ಕ ಪ್ರತಿಫಲವನ್ನೀಯಲಿ. ಇಸ್ರಯೇಲಿನ ದೇವರಾದ ಸರ್ವೇಶ್ವರಸ್ವಾಮಿಯ ಆಶ್ರಯವನ್ನರಸಿ
ಬಂದಿರುವೆ. ಅವರು ನಿನಗೆ ಹೇರಳವಾದ ಆಶೀರ್ವಾದವನ್ನು ಅನುಗ್ರಹಿಸಲಿ!” ಎಂದನು.

13 ಆಗ ರೂತಳು, “ಒಡೆಯಾ, ತಾವು ನನಗೆ ದೊಡ್ಡ ಉಪಕಾರವನ್ನು ಮಾಡಿದ್ದೀರಿ. ನಾನು ತಮ್ಮ ದಾಸಿ ಎನಿಸಿಕೊಳ್ಳುವುದಕ್ಕೂ ಯೋಗ್ಯಳಲ್ಲ. ಆದರೂ ನನ್ನನ್ನು ಕನಿಕರಿಸಿ ಪ್ರೀತಿಯಿಂದ ಮಾತನಾಡಿದ್ದೀರಿ,” ಎಂದು ಹೇಳಿದಳು.

14 ಊಟದ ಸಮಯದಲ್ಲಿ ಬೋವಜನು ರೂತಳನ್ನು ಕರೆದು, “ಇಲ್ಲಿ ಬಾ, ರೊಟ್ಟಿಯನ್ನು
ತೆಗೆದುಕೊಂಡು ದ್ರಾಕ್ಷಾರಸದಲ್ಲಿ ಅದ್ದಿ ತಿನ್ನು,” ಎಂದನು. ಆಕೆ ಕೊಯ್ಯುವವರ ಸಂಗಡ ಕುಳಿತುಕೊಂಡಳು.
ಇದಲ್ಲದೆ ಬೋವಜನು ಆಕೆಗೆ ಸುಟ್ಟ ತೆನೆಗಳನ್ನು ಕೊಟ್ಟನು. ಅವಳು ತೃಪ್ತಿಯಾಗಿ ಊಟಮಾಡಿ ಇನ್ನೂ
ಸ್ವಲ್ಪ ಉಳಿಸಿಕೊಂಡಳು. [15]ಅವಳು ಪುನಃ ಹಕ್ಕಲು ತೆನೆಗಳನ್ನು ಆರಿಸಿಕೊಳ್ಳಲು ಹೋದಾಗ, ಬೋವಜನು
ತನ್ನ ಆಳುಗಳಿಗೆ, “ಸಿವುಡುಗಳ ಮಧ್ಯದಲ್ಲೂ ಅವಳು ತೆನೆಗಳನ್ನು ಆರಿಸಿಕೊಳ್ಳಲಿ; ಅಡ್ಡಿಮಾಡಬೇಡಿ. [16]ನೀವು

ಕೊಯ್ಯುವಾಗ ಕೆಲವು ತೆನೆಗಳನ್ನು ಕಟ್ಟುಗಳಿಂದ ಕಿತ್ತು ಕೆಳಗೆ ಹಾಕಿರಿ. ಅವಳು ಆಯ್ದುಕೊಳ್ಳಲಿ; ಯಾರೂ ಅವಳನ್ನು ಗದರಿಸಬೇಡಿ," ಎಂದು ಆಜ್ಞೆಯಿತ್ತನು.

17 ಅದರಂತೆಯೇ ರೂತಳು ಸಾಯಂಕಾಲದವರೆಗೆ ತೆನೆಗಳನ್ನು ಆಯ್ದುಕೊಂಡಳು. ಅವನ್ನು
ಬಡಿದಾಗ ಸುಮಾರು ಅರ್ಧ ಚೀಲದಷ್ಟು ಜವೆಗೋದಿ ಸಿಕ್ಕಿತು. [18]ಅದನ್ನು ತೆಗೆದುಕೊಂಡು ಊರೊಳಕ್ಕೆ
ಹೋಗಿ ತನ್ನ ಅತ್ತೆಗೆ ತೋರಿಸಿದಳು. ಅಂತೆಯೇ ತನ್ನ ಆಹಾರದಿಂದ ಉಳಿಸಿಟ್ಟಿದ್ದನ್ನು ತನ್ನ ಅತ್ತೆಗೆ ಕೊಟ್ಟಳು.
[19]ಅದನ್ನು ನೋಡಿ ನವೊಮಿ, "ನೀನು ಈ ದಿನ ಎಲ್ಲ ಹಕ್ಕಲಾಯ್ದೆ? ಯಾರ ಹೊಲದಲ್ಲಿ ಕೆಲಸಮಾಡಿದೆ?
ನಿನಗೆ ದಯೆ ತೋರಿಸಿದವನಿಗೆ ಶುಭವಾಗಲಿ!" ಎಂದಳು. ಅದಕ್ಕೆ ರೂತಳು, "ನಾನು ತೆನೆ ಆಯ್ದುಕೊಂಡ
ಹೊಲವು ಬೋವಜನದು," ಎಂದು ಹೇಳಿದಳು.

20 ಇದನ್ನು ಕೇಳಿದ ನವೊಮಿ ಆವೇಶದಿಂದ, "ಜೀವಂತರಿಗೂ ಮೃತರಿಗೂ ಮಾಡಿದ ವಾಗ್ದಾನಗಳನ್ನು ನೆರವೇರಿಸುವ ಸರ್ವೇಶ್ವರ ಅವನನ್ನು ಆಶೀರ್ವದಿಸಲಿ!" ಎಂದು ಹರಸಿ, "ಆ ಮನುಷ್ಯ ನಮಗೆ ಹತ್ತಿರದ ನೆಂಟ, ನಮ್ಮನ್ನು ಪೋಷಿಸಬೇಕಾದವನು," ಎಂದು ತಿಳಿಸಿದಳು.

21 ಇದಲ್ಲದೆ ರೂತಳು, "ಸುಗ್ಗಿಕಾಲ ತೀರುವವರೆಗೂ ನನ್ನ ಆಳುಗಳ ಜೊತೆಯಲ್ಲೇ ಇರಬಹುದೆಂದು ಹೇಳಿದ್ದಾನೆ," ಎಂದಳು.

22 ಅದಕ್ಕೆ ನವೊಮಿ ತನ್ನ ಸೊಸೆಗೆ, "ಹೌದು, ಮಗಳೇ, ನೀನು ಆತನ ಹೆಣ್ಣಾಳುಗಳ ಸಂಗಡ
ಇರುವುದೇ ಒಳ್ಳೆಯದು; ಬೇರೆಯವರ ಹೊಲದಲ್ಲಿ ನಿನಗೆ ತೊಂದರೆಯಾದೀತು," ಎಂದು ಸಲಹೆ ಕೊಟ್ಟಳು.
[23]ಅದರಂತೆಯೆ ರೂತಳು ಜವೆಗೋದಿ ಮತ್ತು ಗೋದಿಯ ಸುಗ್ಗಿ ಮುಗಿಯವವರೆಗೂ ಬೋವಜನ
ಹೆಣ್ಣಾಳುಗಳ ಸಂಗಡ ತೆನೆಗಳನ್ನು ಆಯ್ದುಕೊಳ್ಳುತ್ತಾ ಇದ್ದಳು; ಅತ್ತೆಯ ಮನೆಯಲ್ಲೇ ವಾಸಿಸುತ್ತಿದ್ದಳು.

## ಮದುವೆಯ ಪ್ರಸ್ತಾಪ

**3** ಒಂದು ದಿನ ನವೊಮಿ ರೂತಳಿಗೆ: "ಮಗಳೇ, ನೀನು ಮತ್ತೆ ಗೃಹಿಣಿಯಾಗಿ ಸುಖದಿಂದ ಬಾಳುವಂತೆ
ಏರ್ಪಾಟು ಮಾಡುವುದು ನನ್ನ ಕರ್ತವ್ಯವಲ್ಲವೇ? [2]ಆ ಬೋವಜನು ನಮ್ಮ ನೆಂಟ. ಅವನ ಹೆಣ್ಣಾಳುಗಳ
ಜೊತೆಯಲ್ಲಿ ನೀನು ತೆನೆ ಆರಿಸಿಕೊಳ್ಳುತ್ತಿದ್ದೀಯಲ್ಲವೇ? ಈಗ ನಾನು ಹೇಳುವುದನ್ನು ಗಮನಿಸು; ಈ ಸಂಜೆ
ಬೋವಜನು ಕಣದಲ್ಲಿ ಜವೆಗೋದಿಯನ್ನು ತೂರುವನು. [3]ನೀನು ಸ್ನಾನಮಾಡಿಕೊಂಡು ಸುಗಂಧ ತೈಲವನ್ನು
ಹಚ್ಚಿ, ಸೊಗಸಾದ ಉಡುಪನ್ನು ತೊಟ್ಟುಕೊ. ಆಮೇಲೆ ಕಣಕ್ಕೆ ಹೋಗು. ಅವನು ಅನ್ನಪಾನಮಾಡಿ
ಮುಗಿಸುವವರೆಗೂ ಅವನಿಗೆ ಕಾಣಿಸಿಕೊಳ್ಳಬೇಡ. [4]ಅವನು ಎಲ್ಲಿ ಮಲಗುತ್ತಾನೆ ಎಂಬುದನ್ನು ಗೊತ್ತು
ಮಾಡಿಕೊ. ಅವನು ಮಲಗಿದ ಮೇಲೆ ಅಲ್ಲಿಗೆ ಹೋಗು. ಅವನ ಪಾದಗಳ ಮೇಲಿನ ಹೊದಿಕೆಯನ್ನು
ಮೆತ್ತಗೆ ಸರಿಸಿಬಿಟ್ಟು ಪಕ್ಕದಲ್ಲೇ ಮಲಗು. ಆಮೇಲೆ ನೀನು ಮಾಡಬೇಕಾದುದೇನೆಂಬುದನ್ನು ಅವನೇ
ತಿಳಿಸುವನು," ಎಂದು ಹೇಳಿದಳು.

5 ರೂತಳು: "ನೀವು ಹೇಳಿದಂತೆಯೇ ನಾನು ಮಾಡುತ್ತೇನೆ," ಎಂದು ಮರುತ್ತರಕೊಟ್ಟಳು.
[6]ಅದರಂತೆ ರೂತಳು ಕಣಕ್ಕೆ ಹೋಗಿ ಅತ್ತೆ ಹೇಳಿಕೊಟ್ಟಂತೆ ಮಾಡಿದಳು.

7 ಇತ್ತ ಬೋವಜನು ಅನ್ನಪಾನಮಾಡಿ ಸಂತುಷ್ಟನಾಗಿದ್ದನು. ಅನಂತರ ಜವೆಗೋದಿಯ ರಾಶಿಯ
ಬಳಿ ಹೋಗಿ ಮಲಗಿಕೊಂಡನು. ರೂತಳು ನಿಶ್ಶಬ್ಧವಾಗಿ ಅವನ ಬಳಿಗೆ ಹೋದಳು. ಅವನ ಪಾದಗಳ
ಮೇಲಿದ್ದ ಹೊದಿಕೆಯನ್ನು ಮೆತ್ತಗೆ ಸರಿಸಿ, ಅಲ್ಲೇ ಮಲಗಿಕೊಂಡಳು. ಸುಮಾರು ನಡುರಾತ್ರಿಯಲ್ಲಿ ಅವನಿಗೆ
ತಟ್ಟನೆ ಎಚ್ಚರವಾಯಿತು. ಬಗ್ಗಿ ನೋಡಿದಾಗ ಸ್ತ್ರೀಯೊಬ್ಬಳು ಪಾದಗಳ ಬಳಿ ಮಲಗಿರುವುದನ್ನು ಕಂಡು
ಚಕಿತಗೊಂಡು, "ನೀನು ಯಾರು?" ಎಂದು ಕೇಳಿದನು. [8–9]ಅದಕ್ಕೆ ರೂತಳು: "ಒಡೆಯಾ, ನಾನು ನಿಮ್ಮ
ದಾಸಿ ರೂತಳು. ನೀವು ನನ್ನ ಹತ್ತಿರದ ನೆಂಟರಾಗಿ ಇರುವುದರಿಂದ ದಯವಿಟ್ಟು ನಿಮ್ಮ ಹೊದಿಕೆಯ
ಅಂಚನ್ನು ನನ್ನ ಮೇಲೆ ಹಾಕಿ," ಎಂದು ಕೇಳಿಕೊಂಡಳು.

10 ಬೋವಜನು: "ಮಗಳೇ, ಸರ್ವೇಶ್ವರ ನಿನ್ನನ್ನು ಆಶೀರ್ವದಿಸಲಿ! ನೀನು ಬಡ ಯೌವನಸ್ಥನನ್ನಾಗಲೀ, ಸಿರಿವಂತ ಯೌವನಸ್ಥನನ್ನಾಗಲೀ ಅರಸಲಿಲ್ಲ. ನೀನು ನನಗೆ ತೋರಿದ ವಂಶ

ಗೌರವವು ಇಲ್ಲಿಯವರೆಗೆ ನೀನು ಅತ್ತೆಗೆ ತೋರಿದ ಗೌರವಕ್ಕಿಂತಲೂ ಶ್ರೇಷ್ಠವಾದುದು. [11]ಮಗಳೇ,
ಭಯಪಡಬೇಡ, ನೀನು ಸುಗುಣಶೀಲೆ ಎಂದು ಊರಿಗೆಲ್ಲಾ ತಿಳಿದಿದೆ; ನೀನು ಕೇಳಿಕೊಂಡದ್ದನ್ನು
ಈಡೇರಿಸುವೆನು. [12]ನಾನು ನಿಮಗೆ ಹತ್ತಿರದ ನೆಂಟನಾಗಿರುವುದೇನೋ ನಿಜ. ನಿನ್ನನ್ನು ಸಲಹುವ ಮೈದುನ
ಕರ್ತವ್ಯ ನನ್ನದು. ಆದರೆ ನನಗಿಂತಲೂ ಹತ್ತಿರದ ನೆಂಟನೊಬ್ಬನಿದ್ದಾನೆ. [13]ಈ ರಾತ್ರಿ ಇಲ್ಲೇ ಇರು. ಅವನು
ನಿನ್ನನ್ನು ಸಲಹುವ ಜವಾಬ್ದಾರಿ ವಹಿಸಿಕೊಳ್ಳುವನೋ ಇಲ್ಲವೋ ಎಂಬುದನ್ನು ನಾಳೆ ವಿಚಾರಿಸಿಕೊಳ್ಳೋಣ.
ಅವನು ಅದನ್ನು ವಹಿಸಿಕೊಳ್ಳುವುದಾದರೆ ಒಳ್ಳೆಯದು. ಇಲ್ಲವಾದರೆ ನಾನೇ ಆ ಕರ್ತವ್ಯವನ್ನು
ವಹಿಸಿಕೊಳ್ಳುತ್ತೇನೆ ಎಂದು ಜೀವಸ್ವರೂಪರಾದ ದೇವರ ಹೆಸರಿನಲ್ಲಿ ಪ್ರಮಾಣ ಮಾಡುತ್ತೇನೆ. ಇನ್ನು
ನಿಶ್ಚಿಂತಳಾಗಿ ಮಲಗು," ಎಂದನು.

14 ಅದರಂತೆ ಅವಳು ಅವನ ಪಾದಗಳ ಬಳಿಯಲ್ಲೇ ಮಲಗಿದಳು. ಅವಳು ಅಲ್ಲಿಗೆ ಬಂದದ್ದು
ಯಾರಿಗೂ ತಿಳಿಯಬಾರದೆಂದು ಬೋವಜನು ಹೇಳಿದ್ದನು; ಎಂತಲೇ ನಸುಕಿನಲ್ಲೇ ಎದ್ದಳು. [15]ಬೋವಜನು
ಆಕೆಗೆ, "ನಿನ್ನ ಮೇಲ್ಹೊದಿಕೆಯನ್ನು ಹಾಸು," ಎಂದು ಹೇಳಿ ಅದರಲ್ಲಿ ಸುಮಾರು ಇಪ್ಪತ್ತೈದು
ಕಿಲೋಗ್ರಾಂನಷ್ಟು ಜವೆಗೋದಿಯನ್ನು ಸುರಿದು, ಅದನ್ನೆತ್ತಿ ಹೊರಿಸಿದನು. ಆಕೆ ಅದನ್ನು ಹೊತ್ತುಕೊಂಡು
ಊರೊಳಗೆ ಹೋದಳು. [16]ಅತ್ತೆಯ ಬಳಿಗೆ ಬಂದಾಗ, "ನೀನು ಹೋಗಿದ್ದ ಕಾರ್ಯ ಏನಾಯಿತು?" ಎಂದು
ಕೇಳಲು, ರೂತಳು ಬೋವಜನು ತನಗೆ ಮಾಡಿದ್ದೆಲ್ಲವನ್ನು ತಿಳಿಸಿದಳು. [17]ಇದಲ್ಲದೆ, "ಅತ್ತೆಯ ಬಳಿಗೆ
ಬರಿಗೈಯಲ್ಲಿ ಹೋಗಬೇಡ, ಎಂದು ಹೇಳಿ ಇಷ್ಟೊಂದು ಜವೆಗೋದಿಯನ್ನು ಕೊಟ್ಟನು," ಎಂದು ಹೇಳಿದಳು.

18 ಆಗ ನವೊಮಿ, "ಮಗಳೇ, ಇದರ ಫಲಿತಾಂಶ ಏನಾಗುವುದೆಂದು ಗೊತ್ತಾಗುವವರೆಗೂ
ತಾಳ್ಮೆಯಿಂದಿರು. ಬೋವಜನು ಈ ವಿಷಯವನ್ನು ಇತ್ಯರ್ಥ ಮಾಡುವವರೆಗೆ ಸುಮ್ಮನಿರಲಾರನು," ಎಂದು
ಹೇಳಿದಳು.

### ಬೋವಜನೊಂದಿಗೆ ರೂತಳ ವಿವಾಹ

**4** ಇತ್ತ ಬೋವಜನು ಊರಿನ ಸಭಾಮಂಟಪದ ಬಳಿ ಹೋಗಿ ಅಲ್ಲಿ ಕುಳಿತುಕೊಂಡನು. [2]ಅಷ್ಟರಲ್ಲಿ,
ಬೋವಜನು ಮುಂಚೆ ಹೇಳಿದ್ದ ಎಲಿಮೆಲೆಕನಿಗೆ ಹತ್ತಿರದ ನೆಂಟನಾಗಿದ್ದವನು ಅಲ್ಲಿಗೆ ಬಂದನು. ಆಗ
ಬೋವಜನು ಅವನಿಗೆ: "ಬಾರಪ್ಪಾ, ಇಲ್ಲಿ ಕುಳಿತುಕೊ," ಎಂದು ಕರೆಯಲು, ಅವನು ಬಂದು ಪಕ್ಕದಲ್ಲೇ
ಕುಳಿತುಕೊಂಡನು. [3]ಆಮೇಲೆ ಬೋವಜನು ಹಿರಿಯರಲ್ಲಿ ಹತ್ತುಮಂದಿಯನ್ನು ಕರೆಸಿದನು. ಅವರೂ ಅಲ್ಲಿಗೆ
ಬಂದು ಕುಳಿತುಕೊಂಡರು. ಅನಂತರ ಬೋವಜನು ಆ ನೆಂಟನಿಗೆ, "ನಮಗೆ ಸ್ವಂತ ದವನಾದ
ಎಲಿಮೆಲೆಕನಿಗೆ ಸೇರಿದ ಒಂದು ತುಂಡು ಹೊಲ ಇದೆಯಲ್ಲವೇ? ಅದನ್ನು ಮೋವಾಬ್ ನಾಡಿನಿಂದ ಹಿಂದಕ್ಕೆ
ಬಂದಿರುವ ನವೊಮಿಯು ಮಾರಬೇಕೆಂದಿದ್ದಾಳೆ. ಇದನ್ನು ನಿನಗೆ ತಿಳಿಸಬೇಕೆನಿಸಿತು. [4]ಆ ಹೊಲವನ್ನು
ಕೊಂಡುಕೊಳ್ಳಲು ನಿನಗೆ ಮನಸ್ಸಿದ್ದರೆ ಇಲ್ಲಿ ಕುಳಿತಿರುವ ಹಿರಿಯರ ಮುಂದೆ ಕೊಂಡುಕೊಳ್ಳುವ ಹಕ್ಕು
ಮೊದಲು ನಿನಗೆ, ಅನಂತರ ನನಗೆ ಸೇರಿದ್ದು; ಬೇರೆಯವರಿಗಲ್ಲ," ಎಂದನು. ಆಗ ಆ ವ್ಯಕ್ತಿ: "ನಾನೇ
ಕೊಂಡುಕೊಳ್ಳುತ್ತೇನೆ," ಎಂದು ಹೇಳಿದನು.

5 ಆಗ ಬೋವಜನು, "ನೀನು ಆ ಹೊಲವನ್ನು ಕೊಂಡುಕೊಳ್ಳುವುದಾದರೆ, ಅವಳ ಸೊಸೆಯಾದ
ಮೋವಾಬದ ರೂತಳನ್ನು ನೀನು ಮದುವೆಯಾಗಬೇಕು. ಆಗ ಆ ಹೊಲದ ಖಾತೆ ಗತಿಸಿದ ಮಗನ
ಹೆಸರಿನಲ್ಲೇ ಉಳಿಯುತ್ತದೆ," ಎಂದು ತಿಳಿಸಿದನು. [6]ಅದಕ್ಕೆ ಆ ವ್ಯಕ್ತಿ, "ಹಾಗಾದರೆ ಹೊಲವನ್ನು
ಕೊಂಡುಕೊಳ್ಳುವ ಹಕ್ಕನ್ನು ನಾನು ಬಿಟ್ಟುಕೊಡುತ್ತೇನೆ. ಇಲ್ಲದಿದ್ದರೆ ನನ್ನ ಕುಟುಂಬಕ್ಕೆ ಸೇರಿರುವ ಆಸ್ತಿಗೆ
ನಷ್ಟವಾಗುತ್ತದೆ. ಆದ್ದರಿಂದ ಆ ಹಕ್ಕನ್ನು ನೀನೇ ವಹಿಸಿಕೋ, ನನ್ನಿಂದಾಗದು," ಎಂದುಬಿಟ್ಟನು.

7 ಇಸ್ರಯೇಲರಲ್ಲಿ ಆಸ್ತಿಪಾಸ್ತಿಯನ್ನು ಮಾರಾಟಮಾಡುವಾಗ ಅಥವಾ ವಿನಿಮಯಿಸಿ ಕೊಳ್ಳುವಾಗ
ಒಂದು ಪದ್ಧತಿ ರೂಢಿಯಲ್ಲಿತ್ತು: ಕೊಡುವವನು ಕೊಳ್ಳುವವನಿಗೆ ತನ್ನ ಪಾದರಕ್ಷೆಯನ್ನು ಕೊಡುತ್ತಿದ್ದನು.
ಹೀಗೆ ಇಸ್ರಯೇಲರ ಮಧ್ಯೆ ವ್ಯವಹಾರವು ಇತ್ಯರ್ಥವಾಗುತ್ತಿತ್ತು.

8 ಅಂತೆಯೇ ಆ ನೆಂಟನು, "ಹೊಲವನ್ನು ನೀನೇ ಕೊಂಡುಕೊ," ಎಂದು ಹೇಳಿ ತನ್ನ
ಪಾದರಕ್ಷೆಯನ್ನು ಬೋವಜನಿಗೆ ತೆಗೆದುಕೊಟ್ಟನು. [9]ಆಗ ಬೋವಜನು ಊರಿನ ಹಿರಿಯರೆಲ್ಲರಿಗೆ ಹಾಗು
ಅಲ್ಲಿ ನೆರೆದಿದ್ದ ಜನರಿಗೆ, "ಎಲಿಮೆಲೆಕನಿಗೆ ಮತ್ತು ಕಿಲ್ಯೋನ್, ಮಹ್ಲೋನ್ ಇವರಿಗೆ ಸೇರಿದ್ದ ಆಸ್ತಿ ಎಲ್ಲವನ್ನೂ
ನವೊಮಿಯಿಂದ ನಾನು ಕೊಂಡುಕೊಂಡಿದ್ದೇನೆ. ಇದಕ್ಕೆ ನೀವೆಲ್ಲರೂ ಸಾಕ್ಷಿಗಳು. [10]ಇದಲ್ಲದೆ, ಮಹ್ಲೋನನ
ಪತ್ನಿಯಾದ ಮೋವಾಬ್ಯದ ರೂತಳನ್ನು ನನ್ನ ಹೆಂಡತಿಯನ್ನಾಗಿ ಸ್ವೀಕರಿಸಿದ್ದೇನೆ. ಇದರಿಂದ ಹೊಲದ ಖಾತೆ
ಗತಿಸಿದ ಮಹ್ಲೋನನ ಹೆಸರಿನಲ್ಲೇ ಉಳಿಯುವುದು. ಮಾತ್ರವಲ್ಲ, ಅವನ ವಂಶವೃಕ್ಷವು ಅವನ
ಬಂಧುಬಳಗದವರಲ್ಲೂ ಊರಿನಲ್ಲೂ ನೆಲೆಯಾಗಿರುವುದು. ಇದಕ್ಕೆ ನೀವೆಲ್ಲರು ಸಾಕ್ಷಿಗಳು," ಎಂದನು.

11 ಆಗ ಊರಿನ ಹಿರಿಯರು ಮತ್ತು ನೆರೆದಿದ್ದ ಸಭಿಕರು: "ಹೌದು, ನಾವೆಲ್ಲರೂ ಸಾಕ್ಷಿಗಳು.
ಇಸ್ರಯೇಲಿನ ಮನೆತನವನ್ನು ವೃದ್ಧಿಗೊಳಿಸಿದ ರಾಹೇಲ್ ಮತ್ತು ಲೇಯಾ ಎಂಬ ಕುಲೀನೆಯರನ್ನು ಸರ್ವೇಶ್ವರ
ಆಶೀರ್ವದಿಸಲಿ! ಎಫ್ರಾತ ಕುಲದಲ್ಲಿ ಧನವಂತನಾಗು; [12]ಬೆತ್ಲೆಹೇಮಿನಲ್ಲಿ ಘನವಂತನಾಗು! ಆ ಯುವತಿಯ
ಮುಖಾಂತರ ಸರ್ವೇಶ್ವರ ನಿನಗೆ ಅನುಗ್ರಹಿಸುವ ಸಂತಾನದಿಂದ ನಿನ್ನ ಮನೆತನವು, ಯೆಹೂದನಿಗೆ
ತಾಮಾರಳಿಂದ ಹುಟ್ಟಿದ ಪೆರೆಚನ ಮನೆತನದಂತೆ ಪ್ರಖ್ಯಾತವಾಗಲಿ!" ಎಂದು ಹರಸಿದರು.

13 ಬೋವಜನು ರೂತಳನ್ನು ಮದುವೆಯಾಗಿ ಮನೆಗೆ ಕರೆದುಕೊಂಡು ಹೋದನು.
ಸರ್ವೇಶ್ವರಸ್ವಾಮಿಯ ಅನುಗ್ರಹದಿಂದ ಆಕೆ ಗರ್ಭಿಣಿಯಾಗಿ ಒಬ್ಬ ಮಗನನ್ನು ಹೆತ್ತಳು. ಊರಿನ
ಮಹಿಳೆಯರು ನವೊಮಿಗೆ:

14 "ಸರ್ವೇಶ್ವರ ಸ್ವಾಮಿಗೆ ಸ್ತುತಿ ಸ್ತೋತ್ರ!
ನಿನಗೊಬ್ಬ ವಂಶೋದ್ಧಾರಕನನ್ನು
ಅನುಗ್ರಹಿಸಿದ
ಇಸ್ರಯೇಲ್ ನಾಡಿನಲ್ಲಿ
ಆ ಮಗು ಪ್ರಖ್ಯಾತನಾಗಲಿ!

15 ಅವನು ನಿನಗೆ ನವಚೈತನ್ಯವನ್ನು ಕೊಟ್ಟು ವೃದ್ಧಾಪ್ಯದಲ್ಲಿ ನಿನಗೆ ಸಂರಕ್ಷಣೆಯನ್ನು ನೀಡುವನು.
ಸಪ್ತ ಕುವರರಿಗಿಂತ ನಿನಗೆ ಮೆಚ್ಚುಗೆ ಆದ ನಿನ್ನ ಪ್ರಿಯ ಸೊಸೆ ಆ ಮಗುವನ್ನು ನಿನಗೆ ಕೊಟ್ಟಿದ್ದಾಳೆ!" ಎಂದು
ಹರಸಿದರು.

16 ನವೊಮಿ ಆ ಮಗುವನ್ನು ಎತ್ತಿಕೊಂಡು ತನ್ನ ಮಡಿಲಲ್ಲಿಟ್ಟುಕೊಂಡು ಸಾಕಿ ಸಲಹಿದಳು.

17 ನೆರೆಹೊರೆಯ ಮಹಿಳೆಯರು, "ನವೊಮಿಗೆ ಕುಲಪುತ್ರನೊಬ್ಬನು ಹುಟ್ಟಿದ್ದಾನೆ!" ಎಂದು ಹೇಳಿ
ಆ ಮಗುವಿಗೆ "ಓಬೇದ್" ಎಂದು ಹೆಸರಿಟ್ಟರು. ಇವನೇ ಜೆಸ್ಸೆಯ ತಂದೆ, ದಾವೀದನ ತಾತ.

18–22 ಪೆರೆಚನಿಂದ ದಾವೀದನವರೆಗಿನ ವಂಶಾವಳಿ: ಪೆರೆಚನಿಗೆ ಹೆಜ್ರೋನನು, ಹೆಜ್ರೋನನಿಗೆ
ರಾಮನು, ರಾಮನಿಗೆ ಅಮಿನದಾಬನು ಹುಟ್ಟಿದರು. ಅಮಿನದಾಬನಿಗೆ ನಹಶೋನ, ನಹಶೋನನಿಗೆ
ಸಲ್ಮೋನ್, ಸಲ್ಮೋನನಿಗೆ ಬೋವಜನು ಹುಟ್ಟಿದರು. ಬೋವಜನಿಗೆ ಓಬೇದ್, ಓಬೇದನಿಗೆ ಜೆಸ್ಸಯ,
ಜೆಸ್ಸಯನಿಗೆ ದಾವೀದ ಹುಟ್ಟಿದರು.